ಯಾವ ಜ್ಞಾನವನ್ನು ಅಲ್ಲಾಹನ ಸಂತೃಪ್ತಿಯನ್ನು ಅರಸಿ ಕಲಿಯಬೇಕೋ ಅಂತಹ ಜ್ಞಾನವನ್ನು, ಯಾರು ಈ ಪ್ರಪಂಚದ ಒಂದು ಪಾಲನ್ನು ಪಡೆಯಲು ಮಾತ್ರ ಕಲಿಯುತ್ತಾನೋ, ಅವನು ಪುನರುತ್ಥಾನ ದಿನದಂದು ಸ್ವರ್ಗದ ಪರಿಮಳವನ್ನು ಸಹ ಆಸ್ವದಿಸುವುದಿಲ್ಲ

ಅಬೂ ಹುರೈರಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಅಲ್ಲಾಹನ ಸಂದೇಶವಾಹಕರು
(ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಯಾವ ಜ್ಞಾನವನ್ನು ಅಲ್ಲಾಹನ ಸಂತೃಪ್ತಿಯನ್ನು ಅರಸಿ ಕಲಿಯಬೇಕೋ ಅಂತಹ ಜ್ಞಾನವನ್ನು, ಯಾರು ಈ ಪ್ರಪಂಚದ ಒಂದು ಪಾಲನ್ನು
ಪಡೆಯಲು ಮಾತ್ರ ಕಲಿಯುತ್ತಾನೋ, ಅವನು ಪುನರುತ್ಥಾನ ದಿನದಂದು ಸ್ವರ್ಗದ ಪರಿಮಳವನ್ನು ಸಹ ಆಸ್ವದಿಸುವುದಿಲ್ಲ." - ಅಂದರೆ ಅದರ ಸುವಾಸನೆಯನ್ನು. [صحيح] [رواه أبو داود وابن ماجه وأحمد]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ವಿವರಿಸುವುದೇನೆಂದರೆ, ಯಾರು ಶರೀಅತ್ನ (ಧಾರ್ಮಿಕ) ಜ್ಞಾನವನ್ನು ಕಲಿಯುತ್ತಾನೋ – ಮೂಲತಃ ಅದನ್ನು ಅಲ್ಲಾಹನ ಸಂತೃಪ್ತಿಗಾಗಿ ಕಲಿಯಬೇಕಾಗಿದೆ – ಆದರೆ ಅವನು ಅದನ್ನು ಕೇವಲ ಈ ಪ್ರಪಂಚದ ಒಂದು ಪಾಲು ಮತ್ತು ಸುಖಭೋಗವನ್ನು, ಅಂದರೆ ಸಂಪತ್ತು ಅಥವಾ ಸ್ಥಾನಮಾನವನ್ನು, ಪಡೆಯಲು ಮತ್ತು ಗಳಿಸಲು ಕಲಿಯುತ್ತಾನೋ, ಅವನು ಪುನರುತ್ಥಾನ ದಿನದಂದು ಸ್ವರ್ಗದ ಪರಿಮಳವನ್ನು ಸಹ ಕಾಣುವುದಿಲ್ಲ.

https://www.sunnah.global/hadeeth/kn/show/6262